ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 99 (105)
ಸದಸ್ಯರ ಹೆಸರು : ಶ್ರೀ. ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 19.12.2022
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿರುವ ಸರ್ಕಾರಿ ಮತ್ತು ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಪ್ರಸ್ತುತ ಖಾಲಿಯಿರುವ ದೈಹಿಕ ಶಿಕ್ಷಕರ ಚಿತ್ರಕಲಾ ಶಿಕ್ಷಕರ ಮತ್ತು ಸಂಗೀತ ಶಿಕ್ಷಕರುಗಳ ಸಂಖ್ಯೆ ಎಷ್ಟು; | **ರಾಜ್ಯದಲ್ಲಿರುವ ಸರ್ಕಾರಿ ಪ್ರೌಢಶಾಲೆಗಳು**<br>• ದೈಹಿಕ ಶಿಕ್ಷಕರ ಖಾಲಿ ಹುದ್ದೆಗಳ ಸಂಖ್ಯೆ:1424<br>• ಚಿತ್ರಕಲಾ ಶಿಕ್ಷಕರ ಖಾಲಿ ಹುದ್ದೆಗಳ ಸಂಖ್ಯೆ:0<br>• ಸಂಗೀತ ಶಿಕ್ಷಕರ ಖಾಲಿ ಹುದ್ದೆಗಳ ಸಂಖ್ಯೆ:0<br>**ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಶಾಲೆಗಳು**<br>• ದೈಹಿಕ ಶಿಕ್ಷಕರ ಖಾಲಿ ಹುದ್ದೆಗಳ ಸಂಖ್ಯೆ:233<br>• ಚಿತ್ರಕಲಾ ಶಿಕ್ಷಕರ ಖಾಲಿ ಹುದ್ದೆಗಳ ಸಂಖ್ಯೆ:101<br>• ಸಂಗೀತ ಶಿಕ್ಷಕರ ಖಾಲಿ ಹುದ್ದೆಗಳ ಸಂಖ್ಯೆ:176<br>ರಾಜ್ಯದಲ್ಲಿರುವ ಅನುದಾನಿತ ಪ್ರೌಢಶಾಲೆಗಳು<br>• ದೈಹಿಕ ಶಿಕ್ಷಕರ ಖಾಲಿ ಹುದ್ದೆಗಳ ಸಂಖ್ಯೆ:600<br>• ಸರ್ಕಾರದ ಆದೇಶ ಸಂಖ್ಯೆ: ಇಡಿ 201 ಎಸ್‌ಇಎಸ್ 2011, ದಿನಾಂಕ:09/06/2016ರಂತೆ ವೃತ್ತಿ ಶಿಕ್ಷಕರ ಹುದ್ದೆಯು ನಿವೃತ್ತಿ, ಮರಣದ ನಂತರ ತಂತಾನೆ ರದ್ದಾಗುವುದರಿಂದ ಖಾಲಿ ಹುದ್ದೆ ಇರುವುದಿಲ್ಲ.<br>**ರಾಜ್ಯದಲ್ಲಿರುವ ಅನುದಾನಿತ ಪ್ರಾಥಮಿಕ ಶಾಲೆಗಳು**<br>• ದೈಹಿಕ ಶಿಕ್ಷಕರ ಖಾಲಿ ಹುದ್ದೆಗಳ ಸಂಖ್ಯೆ: 221<br>• ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಚಿತ್ರಕಲಾ ಶಿಕ್ಷಕರ ಮತ್ತು ಸಂಗೀತ ಶಿಕ್ಷಕರುಗಳ ಹುದ್ದೆ ಮಂಜೂರಾಗಿರುವುದಿಲ್ಲ. |
| ಆ | ಸದರಿ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ; | **ಸರ್ಕಾರಿ ಪ್ರೌಢಶಾಲೆಗಳು:-**<br>ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಖಾಲಿಯಿರು 200 ದೈಹಿಕ ಶಿಕ್ಷಕರ ಹುದ್ದೆಗಳು ಮತ್ತು 100 ವಿಶೇಷ ಶಿಕ್ಷಕರ ಹುದ್ದೆಗಳನ್ನು ಆರ್ಥಿಕ ಇಲಾಖೆಯ ಸಹಮತಿಯ ಮೇರೆಗೆ ನೇರ ನೇಮಕಾತಿಯನ್ನು ಕೇಂದ್ರಿಕೃತ ದಾಖಲಾತಿ ಘಟಕ (ಸಿಎಸಿ) ಬೆಂಗಳ: ರು ಇವರ ಮೂಲಕ ಭರ್ತಿ ಮಾಡಲು ಸರ್ಕಾರದ ಪತ್ರ ಸಂಖ್ಯೆ: ಇಪಿ 14 ಎಲ್‌ಬಿಪಿ 2022, ದಿ:13/09/2022ರಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ತಿಳಿಸಲಾಗಿರುತ್ತದೆ.<br>**ಅನುದಾನಿತ ಪ್ರೌಢಶಾಲೆಗಳು:-**<br>ರಾಜ್ಯದ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ಸರ್ಕಾರದ ಆದೇಶ ಸಂಖ್ಯೆ ಇಡಿ 14 ಎಸ್‌ಎಸ್‌ಇ 207 ದಿನಾಂಕ:25/09/2018ರಲ್ಲಿ ದಿನಾಂಕ:31/12/2015ರ ಪೂರ್ವದಲ್ಲಿ ಖಾಲಿಯಾದ ದೈಹಿಕ ಶಿಕ್ಷಣ ಶಿಕ್ಷಕರ |

| | | |
|---|---|---|
| | | ಹುದ್ದೆಗಳನ್ನು ಭರ್ತಿಸಲು ಅವಕಾಶ ಕಲ್ಪಿಸಲಾಗಿದೆ<br>**ಸರ್ಕಾರಿ ಪ್ರಾಥಮಿಕ ಶಾಲೆಗಳು:-**<br>ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಸಂಬಂಧಪಟ್ಟಂತೆ 2120 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳು ಹಾಗೂ ಚಿತ್ರಕಲಾ / ಸಂಗೀತ ಶಿಕ್ಷಕರ ಹುದ್ದೆಗಳು ಖಾಲಿ ಇದ್ದು, ಸದರಿ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ.<br>**ಅನುದಾನಿತ ಪ್ರೌಢಶಾಲೆಗಳು:-**<br>ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ:280 ಇದ್ದಲ್ಲಿ ಅಂತಹ ಶಾಲೆಗಳಿಗೆ ದೈಹಿಕ ಶಿಕ್ಷಣ ಶಿಕ್ಷಕರನ್ನು ನೇಮಿಸಲು ಅವಕಾಶವಿರುತ್ತದೆ. |
| ಇ | ಹಾಗಿದ್ದಲ್ಲಿ, ಸದರಿ ಪ್ರಕ್ರಿಯೆಯನ್ನು ಯಾವಾಗ ಪ್ರಾರಂಭಿಸಲಾಗುವುದು; ಇಲ್ಲವಾದಲ್ಲಿ ಆ ಸಂಸ್ಥೆಗಳನ್ನು ಅನುದಾನಕ್ಕೆ ಒಳಪಡಿಸಲು ಸರ್ಕಾರಕ್ಕಿರುವ ತೊಂದರೆಗಳೇನು? | **ಸರ್ಕಾರಿ ಪ್ರೌಢ ಶಾಲೆಗಳು:-**<br>ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಖಾಲಿಯಿರು 200 ದೈಹಿಕ ಶಿಕ್ಷಕರ ಹುದ್ದೆಗಳು ಮತ್ತು 100 ವಿಶೇಷ ಶಿಕ್ಷಕರ ಹುದ್ದೆಗಳನ್ನು ಆರ್ಥಿಕ ಇಲಾಖೆಯ ಸಹಮತಿಯ ಮೇರೆಗೆ ನೇರ ನೇಮಕಾತಿಯನ್ನು ಕೇಂದ್ರಿಕೃತ ದಾಖಲಾತಿ ಘಟಕ (ಸಿಎಸಿ) ಬೆಂಗಳೂರು ಇವರ ಮೂಲಕ ಭರ್ತಿ ಮಾಡಲು ಸರ್ಕಾರದ ಪತ್ರ ಸಂಖ್ಯೆ: ಇಪಿ 14 ಎಲ್‌ಬಿಪಿ 2022, ದಿ:13/09/2022ರಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ತಿಳಿಸಲಾಗಿರುತ್ತದೆ.<br>**ಅನುದಾನಿತ ಪ್ರೌಢಶಾಲೆಗಳು:-**<br>ದಿನಾಂಕ: 31/12/2015 ರವರೆಗೆ ಖಾಲಿಯಿರುವ ಹುದ್ದೆಗಳಿಗೆ ನೇಮಕಾತಿ ಮಾಡಲು ಸರ್ಕಾರ ಅನುಮತಿ ನೀಡಿರುತ್ತದೆ. ಆದರೆ ಪ್ರಸ್ತುತ ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ:240/ಸೇನಿನಿ:2022 ದಿನಾಂಕ: 18/11/2022 ರಲ್ಲಿ ಸರ್ಕಾರದ ಅಧಿಸೂಚನೆ ಸಂಖ್ಯೆ ಸ ಕ ಇ: 84 ಎಸ್ ಟಿ ಪಿ 2021 ರನ್ವಯ ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು/ಅನುಸೂಚಿತ ಪಂಗಡಗಳ (ಶೈಕ್ಷಣಿಕ ಸಂಸ್ಥೆಗಳಲ್ಲಿನ ಹಾಗೂ ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಮೀಸಲಾತಿ ಹೆಚ್ಚಳ ಮಾಡಿದ್ದು, ಮೀಸಲಾತಿ ಬಿಂದುಗಳ ನಿಗದಿ ಬಗ್ಗೆ ಪರಿಷ್ಕೃತ ಆದೇಶ ಬರುವವರೆಗೆ ಎಲ್ಲಾ ನೇಮಕಾತಿ ಪ್ರಕ್ರಿಯೆಗಳನ್ನು ದಿನಾಂಕ: 1/11/2022 ರಿಂದ ಜಾರಿಗೆ ಬರುವಂತೆ ತಡೆಹಿಡಿದಿರುವುದರಿಂದ ನೇಮಕಾತಿ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲಾಗಿದೆ.<br>ಏಕ ಮಾತ್ರ ಶಾಲೆಯನ್ನು ಹೊಂದಿರುವ ಶಿಕ್ಷಣ ಸಂಸ್ಥೆಗಳ ಶಾಲೆಗಳ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಯನ್ನು ಭರ್ತಿಸಲು ಕ್ರಮ ವಹಿಸಲಾಗುತ್ತಿದೆ.<br>**ಸರ್ಕಾರಿ ಪ್ರಾಥಮಿಕ ಶಾಲೆಗಳು:-**<br>ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಸಂಬಂಧಪಟ್ಟಂತೆ 2120 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳು ಹಾಗೂ ಚಿತ್ರಕಲಾ / ಸಂಗೀತ ಶಿಕ್ಷಕರ ಹುದ್ದೆಗಳು ಖಾಲಿ ಇದ್ದು, ಸದರಿ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ.<br>**ಅನುದಾನಿತ ಪ್ರಾಥಮಿಕ ಶಾಲೆಗಳು:-**<br>ರಾಜ್ಯದಲ್ಲಿ ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಹೆಚ್ಚುವರಿ |

| | | |
|---|---|---|
| | | ಶಿಕ್ಷಕರು ಇರುತ್ತಾರೆ ಮತ್ತು ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 267 ಪಿಎಂಸಿ 2007 ದಿನಾಂಕ:12/10/2007 ರಲ್ಲಿ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಹೆಚ್ಚುವರಿ ಶಿಕ್ಷಕರು ಇರುವುದರಿಂದ ಅವುಗಳಲ್ಲಿನ ಅನುದಾನಿತ ಹುದ್ದೆಗಳು ಶಾಲೆಯನ್ನು ಸಹಾಯಾನುದಾನಕ್ಕೆ ಒಳಪಡಿಸುವ ಪ್ರಥಮ ಸಂದರ್ಭದಲ್ಲಿ ಕೆಲವು ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳನ್ನು ಸಹಾಯಾನುದಾನಕ್ಕೆ ಒಳಪಡಿಸದೇ ಉಳಿದಿದ್ದಲ್ಲಿ ಅಂತಹ ಖಾಲಿ ಹುದ್ದೆಗಳನ್ನು ಹೆಚ್ಚುವರಿ ಶಿಕ್ಷಕರುಗಳಿಂದ ತುಂಬಿಕೊಳ್ಳಬೇಕೆ ಹೊರತು ನೇರ ನೇಮಕಾತಿ ಮಾಡಿಕೊಳ್ಳತಕ್ಕದ್ದಲ್ಲ ಎಂದು ಆದೇಶಿಸಲಾಗಿದೆ. |

ಸಂಖ್ಯೆ: ಇಪಿ 238 ಎಲ್‌ಬಿಪಿ 2022

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು